# ಕನ್ನಡ

ನಾಡು

ನುಡಿ

ಸಾಂಸ್ಕೃತಿಕ

ಸಾಹಿತ್ಯ

ಸಾಧನೆ

# ವಿಷಯಗಳು:

- ಪರಿಚಯ
- ನಾಡು ನುಡಿ
- ಭಾಷೆ
- ಸಾಂಸ್ಕೃತಿಕ
- ಕವಿ
- ಸಾಧಕರು



# ಪರಿಚಯ

ಹೆಸರು: ನಾಗರಕ್ಷ ಟಿ. ಎನ್.

ವರ್ಗ: 1 ನೇ ಸೆಮಿಸ್ಟರ್,
ಬಿ-ಕಾಮ್ 'ಬಿ' ವಿಭಾಗ .

# ನಾಡು ನುಡಿ











# *ನಾಡು ನುಡಿ*

ನಾಡು’ ಎಂದರೆ, ಒಂದು ಬೌಗೋಳಿಕ ಸೀಮೆ ಎಂದು. ‘ನುಡಿ’ ಎಂದರೆ, ಅಭಿವ್ಯಕ್ತಿಗೆ, ಹಾಗು ತನ್ನಂತಿರುವ ಜೀವಿಯೊಡನೆ ಸಂವಾಹನಕ್ಕಾಗಿ ಬಳಸುವ ಮಾಧ್ಯಮ ಎಂದು. ಇಂತಹ ಮಾಧ್ಯಮಗಳಲ್ಲಿ ಒಂದು ದ್ರಾವಿಡ ಭಾಷೆಗಳಲ್ಲಿ ಬಹಳ ಹಳೆಯದರಲ್ಲಿ ಒಂದಾದ ಕನ್ನಡ ಭಾಷೆ.

ಇಂದು ವಿವಿಧ ರೂಪಗಳಲ್ಲಿ ಸುಮಾರು ೪೫ ದಶಲಕ್ಷ ಜನರು ಆಡುನುಡಿಯಾಗಿ ಬಳಸುತ್ತಿದ್ದಾರೆ. ನಮ್ಮ ‘ಕನ್ನಡ’ ಭಾಷೆಯು ಭಾರತದ ೨೨ ಅಧಿಕೃತ ಭಾಷೆಗಳಲ್ಲಿ ಒಂದಾಗಿದೆ. ಒಂದು ಬೌಗೋಳಿಕ ಎಲ್ಲೆಯೊಳಗೆ ಜನರು ಹೊಂದಿರುವ ಸಂಸ್ಕೃತಿ ಉಳಿಯ ಬೇಕೆಂದರೆ ಆ ಎಲ್ಲೆಯೊಳಗಿನ ಭಾಷೆ ಅಸ್ತಿತ್ವದಲ್ಲಿರಲೇಬೇಕು. ಕನ್ನಡ ಭಾಷೆ ಇಂದು ಇಂಗ್ಲೀಷಿನ ವ್ಯಾಪಕ ಬಳಕೆಯಿಂದಾಗಿ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆ. ಈ ಪ್ರಬಂಧದಲ್ಲಿ ಕನ್ನಡ ನಾಡ ನುಡಿಯ ರಕ್ಷಣೆ, ಸವಾಲು ಮತ್ತು ವಿವಿಧ ಕ್ಷೇತ್ರಗಳಲ್ಲಿ ಕನ್ನಡದ ಬಳಕೆಯ ಬಗ್ಗೆ ಬರೆಯಲಾಗಿದೆ.





ಕನ್ನಡ, ಕರುನಾಡು ಇತ್ತೀಚಿನದೆ?_

ಕನ್ನಡ ನುಡಿಯನ್ನು ಆಡುಮಾತಾಗಿ ೨೫೦೦ ವರ್ಷಗಳಿಂದ ಬಳಸಲಾಗುತ್ತಿದೆ. ಕನ್ನಡ ಲಿಪಿ ಮತ್ತು ಬರೆಯುವ ಪದ್ಧತಿ ಸುಮಾರು ೧೯೦೦ ವರ್ಷಗಳ ಹಿಂದೆಯೇ ಇದ್ದಿತು. ಇನ್ನು ಕರುನಾಡು ಯಾವಾಗಿನಿಂದ ಇದೆ ನೀವೆ ಊಹಿಸಿಕೊಳ್ಳಿ.

ಹಳೆಯ ಇಂಗ್ಲೀಷ್ ಭಾಷೆ ಸುಮಾರು ಕ್ರಿ.ಶ. ೧೦೦೦ ರಲ್ಲಿ ಜನರಿಂದ ಬಳಸಲ್ಪಡುತ್ತಿತ್ತು. ಬರಹದಲ್ಲಿ ಇಂಗ್ಲೀಷ್ ಪ್ರಭುದ್ಧಮಾನಕ್ಕೆ ಬಂದಿದ್ದು ಎಷ್ಟೋ ವರ್ಷಗಳು ಕಳೆದ ಬಳಿಕ. ನಡು ಇಂಗ್ಲೀಷ್ ಕ್ರಿ.ಶ. 1400 ರಲ್ಲಿ ಆಡು ಮತ್ತು ಬರಹದ ರೂಪದಲ್ಲಿ ಬಳಸಲ್ಪಟ್ಟಿತು. ಆಧುನಿಕ ಇಂಗ್ಲೀಷ್ ೧೫ ಅಥವಾ ೧೬ ನೆ ಶತಮಾನದಿಂದೀಚೆಗೆ ಬಹುತೇಕ ರಾಷ್ಟ್ರಗಳಲ್ಲಿ ಜನರಿಂದ ವ್ಯವಹಾರಕ್ಕಾಗಿ, ಜ್ಞಾನಕ್ಕಾಗಿ, ತಾಂತ್ರಿಕ ಕಾರಣಗಳಿಗಾಗಿ, ಆಡಳಿತಕ್ಕಾಗಿ, ಮತ್ತು ಪರಸ್ಪರ ಸಂಬಂಧಹೊಂದುವ ಸಲುವಾಗಿ ಬಳಸಲ್ಪಡುತ್ತಿದೆ.







ಕನ್ನಡದ ಬಗ್ಗೆ ಹೇಳುವುದಾದರೆ, ಕನ್ನಡವು ದಕ್ಷಿಣ ಭಾರತದ ಭಾಷೆಗಳ ಮೂಲವೆಂದು ಗುರುತಿಸಲ್ಪಟ್ಟಿರುವ ಮೂಲದ್ರಾವಿಡದಿಂದ ಯಾವಾಗ ಆಡುಭಾಷೆಯಾಗಿ ಪರಿವರ್ತಿತವಾಯಿತೆಂದು ಖಚಿತವಾಗಿ ಹೇಳಲು ಅಸಾಧ್ಯ. ತಮಿಳು ಭಾಷೆಯು ದ್ರಾವಿಡ ಭಾಷೆಯಿಂದ ಬೇರ್ಪಟ್ಟ ಸಮಯದಲ್ಲಿಯೇ ಕನ್ನಡವು ಕೂಡ ಆಡುಭಾಷೆಯಾಗಿ ಬೇರ್ಪಟ್ಟಿತೆಂದು ಹೇಳಲಾಗುತ್ತದೆ. ಈ ಭಾಷೆಯ ಲಿಪಿಯು ಸುಮಾರು ೧೫೦೦-೧೬೦೦ ವರ್ಷಗಳಿಗಿಂತಲೂ ಹಳೆಯದು. ಐದನೆಯ ಶತಮಾನದ ಹಲ್ಮಿಡಿ ಶಾಸನದ ಸಮಯಕ್ಕಾಗಲೇ ಕನ್ನಡವು ಸಾಕಷ್ಟು ಅಭಿವೃದ್ಧಿ ಹೊಂದಿತು. ಲಿಪಿಯ ಉಗಮದ ಇತಿಹಾಸವನ್ನು ಗಮನಿಸಿದರೆ, ತಮಿಳಿಗಿಂತಲೂ ಕನ್ನಡದ ಲಿಪಿಯೇ ಮೊದಮೊದಲಿಗೆ ಹೆಚ್ಚು ಪ್ರವರ್ಧಮಾನಕ್ಕೆ ಬಂದಂತೆ ಕಾಣಿಸುತ್ತದೆ. ಕುಮುದೇಂದು ಮುನಿ ರಚಿಸಿದ 'ಸಿರಿಭೂವಲಯ' ಗ್ರಂಥದಲ್ಲಿ ಕನ್ನಡ ಭಾಷೆಗೆ ವಿಶ್ವದ ಎಲ್ಲಾ ಭಾಷೆಗಳನ್ನು ಅಡಗಿಸಿಕೊಳ್ಳುವ ಶಕ್ತಿ ಇದೆ ಎಂದು ಸಾಭೀತುಪಡಿಸಿದ್ದಾರೆ. ಆದರೆ, ಅವರ ಗ್ರಂಥವನ್ನು ಜನ ಸಾಮಾನ್ಯರಿಗೆ ದೊರಕುವ ಹಾಗೆ ಸರ್ಕಾರ ಗಮನಹರಿಸಿಲ್ಲ. ಕನ್ನಡ ವೇದಗಳ ಕಾಲದಿಂದಲೂ ಬಳಕೆಯಲ್ಲಿದ್ದಿತು ಹಾಗೂ ಅದು ನಾಡ ರಕ್ಷಣೆಯ ಸಲುವಾಗಿ ಗುಪ್ತ ಭಾಷೆಯಾಗಿ ಬಳಕೆಯಾಗಿತ್ತೆಂದು ಕೆಲವು ಶಾಸನಗಳಲ್ಲಿ ಉಲ್ಲೇಖವಾಗಿದೆ.




# *ಭಾಷೆ*




ದ್ರಾವಿಡ ಭಾಷೆಗಳಲ್ಲಿ ಪ್ರಾಮುಖ್ಯವುಳ್ಳ ಭಾಷೆಯೂ ಭಾರತದ ಪುರಾತನವಾದ ಭಾಷೆಗಳಲ್ಲಿ ಒಂದೂ ಆಗಿರುವ ಕನ್ನಡ ಭಾಷೆಯನ್ನು ಅದರ ವಿವಿಧ ರೂಪಗಳಲ್ಲಿ ಸುಮಾರು ೪೫ ದಶಲಕ್ಷ (೪.೫ ಕೋಟಿ) ಜನರು ಆಡು ನುಡಿಯಾಗಿ ಬಳಸುತ್ತಲಿದ್ದಾರೆ. ಕನ್ನಡ ಕರ್ನಾಟಕ ರಾಜ್ಯದ ಆಡಳಿತ ಭಾಷೆ.[೧೧] ಜಗತ್ತಿನಲ್ಲಿ ಅತ್ಯಂತ ಹೆಚ್ಚು ಮಂದಿ ಮಾತನಾಡುವ ಭಾಷೆಯೆಂಬ ನೆಲೆಯಲ್ಲಿ ಇಪ್ಪತೊಂಬತ್ತನೆಯ ಸ್ಥಾನ ಕನ್ನಡಕ್ಕಿದೆ. ೨೦೧೧ರ ಜನಗಣತಿಯ ಪ್ರಕಾರ ಜಗತ್ತಿನಲ್ಲಿ ೬.೪ ಕೋಟಿ ಜನರು ಕನ್ನಡ ಮಾತನಾಡುತ್ತಾರೆ ಎಂದು ತಿಳಿದುಬಂದಿದೆ. ಇವರಲ್ಲಿ ೫.೫ ಕೋಟಿ ಜನರ ಮಾತೃಭಾಷೆ ಕನ್ನಡವಾಗಿದೆ. ಬ್ರಾಹ್ಮಿ ಲಿಪಿಯಿಂದ ರೂಪುಗೊಂಡ ಕನ್ನಡ ಲಿಪಿಯನ್ನು ಉಪಯೋಗಿಸಿ ಕನ್ನಡ ಭಾಷೆಯನ್ನು ಬರೆಯಲಾಗುತ್ತದೆ. ಕನ್ನಡ ಬರಹದ ಮಾದರಿಗಳಿಗೆ ಸಾವಿರದ ಐನೂರು ವರುಷಗಳ ಚರಿತ್ರೆಯಿದೆ. ಕ್ರಿ.ಶ. ಆರನೆಯ ಶತಮಾನದ ಪಶ್ಚಿಮ ಗಂಗ ಸಾಮ್ರಾಜ್ಯದ ಕಾಲದಲ್ಲಿ [೧೨] ಮತ್ತು ಒಂಬತ್ತನೆಯ ಶತಮಾನದ ರಾಷ್ಟ್ರಕೂಟ ಸಾಮ್ರಾಜ್ಯದ ಕಾಲದಲ್ಲಿ *ಹಳಗನ್ನಡ ಸಾಹಿತ್ಯ* ಅತ್ಯಂತ ಹೆಚ್ಚಿನ ರಾಜಾಶ್ರಯ ಪಡೆಯಿತು.[೧೩][೧೪] ಅದಲ್ಲದೆ ಸಾವಿರ ವರುಷಗಳ ಸಾಹಿತ್ಯ ಪರಂಪರೆ ಕನ್ನಡಕ್ಕಿದೆ.[೧೫]ವಿನೋಬಾ ಭಾವೆ ಕನ್ನಡ ಲಿಪಿಯನ್ನು *ಲಿಪಿಗಳ ರಾಣಿಯೆಂದು* ಹೊಗಳಿದ್ದಾರೆ.[

1.ಹಳಗನ್ನಡ ಕ್ರಿ.ಶ. ೪೫೦ರಿಂದ ಕ್ರಿ.ಶ. ೧೨೦೦ರವರೆಗೆ,
2.ನಡುಗನ್ನಡ ಕ್ರಿ. ಶ. ೧೨೦೦ರಿಂದ ಕ್ರಿ.ಶ. ೧೭೦೦ರವರೆಗೆ ಮತ್ತು
3.ಹೊಸಗನ್ನಡ ಕ್ರಿ. ಶ. ೧೭೦೦ರಿಂದ ಪ್ರಸ್ತುತ ಕಾಲಘಟ್ಟದವರೆ

ಕನ್ನಡ ಭಾಷಾ ಪರಿಣತರು ಕನ್ನಡ ಸಾಹಿತ್ಯದ ಬೆಳವಣಿಗೆಯನ್ನು ಅಭ್ಯಾಸ ಮಾಡಬಹುದಾದ ಕಾಲಮಾನಗಳನ್ನು ಈ ಕೆಳಗಿನಂತೆಯೂ ನಿಷ್ಕರ್ಷಿಸಿದ್ದಾರೆ.

1.ಪೂರ್ವದ ಹಳಗನ್ನಡ – ಅನಿಶ್ಚಿತ ಕಾಲಘಟ್ಟದಿಂದ ೭ನೇಯ ಶತಮಾನದವರೆಗೆ;
2.ಹಳಗನ್ನಡ – ೭ರಿಂದ ೧೨ನೆಯ ಶತಮಾನದವರೆಗೆ;
3.ನಡುಗನ್ನಡ – ೧೨ನೆಯ ಶತಮಾನದ ಪ್ರಾರಂಭದಿಂದ ೧೮ನೆಯ ಶತಮಾನದವರೆಗೆ;
4.ಹೊಸಗನ್ನಡ – ೧೮ನೆಯ ಶತಮಾನದ ಆದಿಯಿಂದ ಈಚೆಗೆ.

ಕಳೆದ ಶತಮಾನದಲ್ಲಿ ಎಂದರೆ ೨೦ನೆಯ ಶತಮಾನದಲ್ಲಿ ಕನ್ನಡ ಭಾಷೆಯ ಅಭಿವೃದ್ಧಿ ಬಹಳ ವ್ಯಾಪಕವಾಗಿ ನಡೆಯಿತು. ಕನ್ನಡ ಭಾಷೆಯು ಅಭಿಜಾತ ಭಾಷೆಯೆಂಬ ಸ್ಥಾನಮಾನವನ್ನು ಕೇಂದ್ರ ಸರಕಾರದಿಂದ ಪಡೆದಿದೆ. ಅಂತರಜಾಲದಲ್ಲಿ ಕನ್ನಡ ಭಾಷೆಯ ಬಳಕೆ ಯಥೇಚ್ಛವಾಗಿದೆ. ಕನ್ನಡ ಭಾಷೆ ವಾಣಿಜ್ಯ ಕ್ಷೇತ್ರದಲ್ಲಿಯೂ ಮುಂಚೂಣಿಯ ಭಾಷೆಯಾಗಿ ಬೆಳೆಯತೊಡಗಿದೆ.
ಕನ್ನಡದಲ್ಲಿ ಸಂಸ್ಕೃತದ ಪ್ರಭಾವ ಅಸಾಧಾರಣವಾದುದು. ಪ್ರಾಕೃತ, ಪಾಳಿ ಮುಂತಾದ ಭಾಷೆಗಳ ಪ್ರಭಾವವೂ ಕನ್ನಡಕ್ಕಿದೆ. ಕ್ರಿ.ಪೂ ಮೂರನೆಯ ಶತಮಾನಕ್ಕೂ ಮುನ್ನವೇ ಕನ್ನಡ ಮೌಖಿಕ ಪರಂಪರೆಯ ಭಾಷೆಯಾಗಿ ರೂಪುಗೊಂಡಿತ್ತೆಂಬುದಕ್ಕೂ ಪ್ರಾಕೃತ ಭಾಷೆಯಲ್ಲಿಯೂ ತಮಿಳು ಭಾಷೆಯಲ್ಲಿಯೂ ಬರೆಯಲ್ಪಟ್ಟ ಶಾಸನಗಳಲ್ಲಿ ಕನ್ನಡದ ಶಬ್ದಗಳು ಬಳಕೆಯಾಗಿವೆಯೆಂದೂ ಇತಿಹಾಸ ತಜ್ಞ ಐರಾವತಂ ಮಹಾದೇವನ್ ಸಾಬೀತುಪಡಿಸಿದ್ದಾರೆ. ಆ ಸಂಶೋಧನೆಯ ಪ್ರಕಾರ ಕನ್ನಡ ಅಗಾಧ ಪ್ರಮಾಣದ ಜನತೆ ಮಾತನಾಡುತ್ತಿದ್ದ ಭಾಷೆಯಾಗಿದ್ದಿತೆಂದೂ ತಿಳಿದುಬಂದಿದೆ.[೧೭][೧೮][೧೯][೨೦][೨೧] ಕೆ.ವಿ. ನಾರಾಯಣರು ಹೇಳುವಂತೆ, ಇಂದಿಗೆ ಕನ್ನಡದ ಉಪಭಾಷೆಗಳೆಂದು ಗುರುತಿಸಲ್ಪಡುವ ಭಾಷೆಗಳಲ್ಲಿ ಹೆಚ್ಚಿನವು ಕನ್ನಡದ ಹಳೆಯ ರೂಪವನ್ನು ಹೋಲುವಂಥದ್ದಾಗಿರಬಹುದು. ಅಲ್ಲದೆ ಅನ್ಯ ಭಾಷೆಗಳ ಪ್ರಭಾವ ವ್ಯಾಪಕವಾಗಿ ಒಳಗಾಗದ ಭಾಷೆಗಳು ಇವೆಂದೂ ಅಭಿಪ್ರಾಯಪಡುತ್ತಾರೆ

# ಕನ್ನಡ ಸಂಸ್ಕೃತಿ

- ನಮ್ಮ ನೆರೆಯ ಸಂಸ್ಕೃತಿಗಳಿಗೆ ಹೋಲಿಸಿದರೆ ನಾವು ಅನೇಕ ಸಾಂಸ್ಕೃತಿಕ ಹೋಲಿಕೆಗಳನ್ನು ನೋಡುತ್ತೇವೆ ಮತ್ತು ಭಾಷೆ ಸಂಸ್ಕೃತಿಯ ವಿಶಿಷ್ಟ ಗುರುತಾಗುತ್ತದೆ. ಅದೇ ಸಮಯದಲ್ಲಿ, ಕರ್ನಾಟಕ ಮತ್ತು ಕನ್ನಡ ಭಾಷೆಯ ಪ್ರದೇಶಗಳ ಒಂದೇ ವ್ಯಾಪ್ತಿಯಲ್ಲಿ, ನಾವು ವೈವಿಧ್ಯಮಯ ಸಾಂಸ್ಕೃತಿಕ ಆಚರಣೆಗಳು ಮತ್ತು ಬಳಕೆಗಳನ್ನು ನೋಡುತ್ತೇವ
- ಕನ್ನಡ ಭಾಷೆ ಮತ್ತು ಸಂಸ್ಕೃತಿ ಉತ್ಕೃಷ್ಟವಾದದ್ದು, ಶ್ರೀಮಂತವಾದದ್ದು. ವಿಪುಲವಾಗಿ ದೊರಕುವ ಸಾಹಿತ್ಯ ಕೃತಿಗಳು, ಐತಿಹಾಸಿಕ ದಾಖಲೆಗಳು ಈ ಅಂಶವನ್ನು ದೃಢೀಕರಿಸುತ್ತವೆ.ಅನೇಕ ವಿಭಿನ್ನ ಯುಗಗಳು ಬಂದು ಹೋಗಿವೆ ಆದರೆ ನಿಜವಾದ ಸಂಸ್ಕೃತಿಯ ಪ್ರಭಾವವನ್ನು ಬದಲಾಯಿಸಲು ಯಾವುದೇ ಯುಗವು ತುಂಬಾ ಶಕ್ತಿಯುತವಾಗಿಲ್ಲ. ಆದ್ದರಿಂದ, ಯುವ ಪೀಳಿಗೆಯ ಸಂಸ್ಕೃತಿಯು ಇನ್ನೂ ಹಳೆಯ ತಲೆಮಾರುಗಳೊಂದಿಗೆ ಸಂಪರ್ಕ ಹೊಂದಿದೆ.

# ಜ್ಞಾನಪೀಠ ಪ್ರಶಸ್ತಿಯ ಕಿರೀಟ

- ಕನ್ನಡ ಸಾಹಿತಿಗಳು ಜ್ಞಾನಪೀಠ ಪ್ರಶಸ್ತಿಯಿಂದ ಪುರಸ್ಕೃತಗೊಂಡು, ಕನ್ನಡವನ್ನು ಅತೀ ಹೆಚ್ಚು ಜ್ಞಾನಪೀಠ ಪ್ರಶಸ್ತಿ ಪಡೆದ ಭಾಷೆಯನ್ನಾಗಿ ಮಾಡಿದ್ದಾರೆ.
- ಕನ್ನಡದ ಮೊದಲ ಜ್ಞಾನಪೀಠ ಪ್ರಶಸ್ತಿ ಕುವೆಂಪು ಅವರಿಗೆ.
- ಅಲ್ಲಿಂದ ಒಟ್ಟು 8 ಜನರಿಗೆ ಜ್ಞಾನ ಪೀಠ ಪ್ರಶಸ್ತಿ ಸಂದಿದೆ.

# ಕವಿಗಳು





ಕನ್ನಡ ಪ್ರಸಿದ್ಧ ಕವಿಗಳು

# ಕನಕ ದಾಸ








# ಪುರಂದರ ದಾಸ




# ಅಕ್ಕ ಮಹಾದೇವಿ


















ಕುವೆಂಪು

ಶಿವರಾಮ ಕಾರಂತ್

ಗಿರೀಶ್ ಕಾರ್ನಾಡ್

# ಸಾಧಕರು



*ಕರ್ನಾಟಕ ಬಹಳಷ್ಟು ಸಾಧಕರ ತವರಾಗಿದ್ದು ಕರ್ನಾಟಕದ ಹೆಮ್ಮೆ ಹಾಗು ಕೀರ್ತಿಗೆ ಕಾರಣವಾಗಿದೆ . ಆ ಸಾಧಕರಲ್ಲಿ ಕೆಲವರು :*

- ಕ್ರಿಕೆಟರ್ ರಾಹುಲ್ ದ್ರಾವಿಡ್
- ರಂಗಭೂಮಿಯ ಭೀಷ್ಮ ಬಿ.ವಿ.ಕಾರಂತ್
- ಲೇಖಕ ವಿನಾಯಕ ಕೃಷ್ಣ ಗೋಕಕ್
- ನಟ ಡಾ . ರಾಜಕುಮಾರ್
- ವಿಜ್ಞಾನಿ ಸಿ.ವಿ.ರಾಮನ್
- ಅಭಿಯಂತರ ಮೋಕ್ಷಗುಂಡಂ ವಿಶ್ವೇಶ್ವರಯ್ಯ
- ಕೆ.ಎಂ.ಕಾರಿಯಪ್ಪ
- ಕ್ರಿಕೆಟರ್ ಅನಿಲ್ ಕುಂಬ್ಳೆ
- ಗಾಯಕಿ ಗಂಗೂಬಾಯಿ ಹಾರಂಗಲ್







# ಧನ್ಯವಾದಗಳು

